**<u>ಟಿ.ನರಸೀಪುರದ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ</u>**

**<u>ಸಿ.ಸಿ. ನಂ.189/2024</u>**

ಪಿರ್ಯಾದುದಾರರು : ಶ್ರೀ ಎನ್.ಗೌರಿಶಂಕರ,
ಬಿನ್ ಎಂ.ಸಿ.ನಾಗರಾಜು,
ಸುಮಾರು 39 ವರ್ಷ,
ವಾಸಃ ಉಕ್ಕಲಗೆರೆ ಗ್ರಾಮ,
ಸೋಸಲೆ ಹೋಬಳಿ,
ಟಿ.ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

–ವಿರುದ್ಧ–

ಆರೋಪಿ : ಶ್ರೀ ಮಲ್ಲಿಕ,
ಬಿನ್ ಪುಟ್ಟಸ್ವಾಮಿ,
ಸುಮಾರು 33 ವರ್ಷ,
ವಾಸಃ ಉಕ್ಕಲಗೆರೆ ಗ್ರಾಮ,
ಸೋಸಲೆ ಹೋಬಳಿ,
ಟಿ.ನರಸೀಪುರ ತಾಲ್ಲೂಕು,
ಮೈಸೂರು ಜಿಲ್ಲೆ.

**<u>ಭಾ ದಂ ಪ್ರ ಸಂ ಕಲಂ.313 ರ ಅಡಿಯಲ್ಲಿ ಆರೋಪಿಯ ಹೇಳಿಕೆ</u>**

ಪ್ರ:1: ಈ ಮೊಕದ್ದಮೆಯಲ್ಲಿ ವಿಚಾರಣೆ ಆಗಿರುವ ಅಭಿಯೋಜನೆ ಪರ ಸಾಕ್ಷಿದಾರರ ಹೇಳಿಕೆಯನ್ನು ಕೇಳಿಸಿಕೊಂಡಿದ್ದೀರಾ?

ಉ:

ಪ್ರ:2: ಫ್ರಾಸಾ–1 ಶ್ರೀ ಎನ್.ಗೌರಿಶಂಕರ, ಇವರು ತಮ್ಮ ಸಾಕ್ಷ್ಯದಲ್ಲಿ, ಆರೋಪಿಯಾದ ನೀವು ಪಿರ್ಯಾದುದಾರರಿಂದ ದಿನಾಂಕ 02.02.2019 ರಂದು ರೂ.1,00,000/– ಹಣವನ್ನು ನಿಮ್ಮ ತುರ್ತು ಅವಶ್ಯಕತೆಗಾಗಿ ಸಾಲವನ್ನು ಪಡೆದಿದ್ದು, ಅದೇ ದಿನ ಸದರಿ ಸಾಲದ ಮರುಪಾವತಿಗಾಗಿ ರೂ.1,00,000/– ರಂತೆ ದಿನಾಂಕ 28.05.2019 ರ ಮುಂದಿನ ದಿನಾಂಕವನ್ನು ನಮೂದಿಸಿದ ನಿಮ್ಮ ಬ್ಯಾಂಕ್ ಖಾತೆಯುಳ್ಳ ವಿಜಯ ಬ್ಯಾಂಕ್, ಕಗ್ಗಲಿಪುರ ಶಾಖೆಯ ಚೆಕ್ ನಂ.095981 ನ್ನು ಅವರಿಗೆ ನೀಡಿರುವುದಾಗಿ ಹೇಳಿದ್ದಾರೆ. ಈ ಬಗ್ಗೆ ನಿಮಗೆ ಏನಾದರೂ ಹೇಳುವುದಿದೆಯೆ?

ಉಃ

ಪ್ರ:3: ಫ್ರಾಸಾ–1 ರವರು ಮುಂದುವರೆದು ಸಾಕ್ಷಿ ನುಡಿಯುತ್ತಾ ಅವರು ಸದರಿ ಚೆಕ್ಕನ್ನು ಪಿರ್ಯಾದುದಾರರು ತಮ್ಮ ಬಾಬ್ತು ಕರ್ನಾಟಕ ಬ್ಯಾಂಕ್, ಟಿ.ನರಸೀಪುರ ಶಾಖೆಯ ಖಾತೆಗೆ ನಗಧೀಕರಣಕ್ಕಾಗಿ ಸಲ್ಲಿಸಿದಾಗ, ಸದರಿ ಬ್ಯಾಂಕಿನವರು ಚೆಕ್ಕನ್ನು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಮುನಿರಬಾದ್ ಶಾಖೆಗೆ ನಗಧೀಕರಣಕ್ಕಾಗಿ ಸಲ್ಲಿಸಿದಾಗ, **'ಸಾಕಷ್ಟು ಹಣ ಇರುವುದಿಲ್ಲ (Funds Insufficient)'** ಎಂಬ ಮಾಹಿತಿಯೊಂದಿಗೆ ಚೆಕ್ ಅಮಾನ್ಯಗೊಂಡು ದಿನಾಂಕ 14.06.2019 ರಂದು ಸದರಿ ಚೆಕ್ಕು ವಾಪಸ್ಸು ಬಂದಿರುವುದಾಗಿ ಹೇಳಿದ್ದಾರೆ. ಈ ಬಗ್ಗೆ ನಿಮಗೆ ಏನಾದರೂ ಹೇಳುವುದಿದೆಯೆ?

ಉಃ

ಪ್ರ:4: ಫ್ರಾಸಾ–1 ರವರು ಮುಂದುವರೆದು ಸಾಕ್ಷಿ ನುಡಿಯುತ್ತಾ ನಂತರ ದಿನಾಂಕ 28.06.2019 ರಂದು ನಿಮಗೆ ವಕೀಲರ ಮುಖಾಂತರ ನೋಟೀಸು ಕಳಿಸಿ ಸಾಲದ ಹಣವನ್ನು ಮರುಪಾವತಿ ಮಾಡಬೇಕೆಂದು ಕೇಳಿದ್ದು, ಆದರೆ ನೀವು ಇದುವರೆಗೂ ಹಣವನ್ನು ಮರುಪಾವತಿ ಮಾಡಿರುವುದಿಲ್ಲ ಎನ್ನುವುದಾಗಿ ಹೇಳಿದ್ದಾರೆ. ಈ ಬಗ್ಗೆ ನಿಮಗೆ ಏನಾದರೂ ಹೇಳುವುದಿದೆಯೆ?

ಉಃ

ಪ್ರ:5:ಈ ಪ್ರಕರಣದ ವಿಚಾರವಾಗಿ ಏನಾದರೂ ಹೇಳುವುದು ಇದೆಯೆ?

ಉಃ

ಪ್ರ:6:ನಿಮ್ಮ ಪರವಾಗಿ ಯಾವುದಾದರೂ ಸಾಕ್ಷಿ ಅಥವಾ ದಾಖಲೆಗಳನ್ನು ಹಾಜರುಪಡಿಸುತ್ತೀರಾ?

ಉಃ

**[ಮೇಲ್ಕಂಡ ಆರೋಪಿಯ ಹೇಳಿಕೆಯನ್ನು ನನ್ನ ಸಮಕ್ಷಮದಲ್ಲಿ ತೆರೆದ ನ್ಯಾಯಾಲಯದಲ್ಲಿ ಅವರಿಗೆ ಓದಿ ಹೇಳಿದ ನಂತರ ಉತ್ತರಗಳನ್ನು ಅವರು ಹೇಳಿದಂತೆ ದಾಖಲಿಸಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ.]**

ದಿನಾಂಕಃ 07.11.2024

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾದಂ.,**
**ಟಿ.ನರಸೀಪುರ. ****